ಶ್ರೀ.ಕೆ.ಎಸ್.ಬೀಳಗಿ (ಸಾರಿಗೆ ಸಚಿವರು) :

ಅ. ಹೊಸ ಬಸ್ ನಿಲ್ದಾಣದಿಂದ ಕಾರ್ಯಾಚರಣೆಗೆ ಒಳಪಡಿಸಲಾಗುತ್ತಿರುವ 200 ಸಾರಿಗೆಗಳಿಗೆ ಹಳೆಯ ಬಸ್ ನಿಲ್ದಾಣದ ಬಳಿ ನಿಲುಗಡೆ ಒದಗಿಸಲಾಗಿದೆ. ಇದಲ್ಲದೆ, ಹೊಸ ಬಸ್ ನಿಲ್ದಾಣ ಮತ್ತು ಹಳೆಯ ಬಸ್ ನಿಲ್ದಾಣದ ನಡುವೆ 30 ಸುತ್ತುಗಳನ್ನೊಳಗೊಂಡ 2 ಪ್ರತ್ಯೇಕ ಬಸ್ಸುಗಳನ್ನು ಪ್ರಯಾಣಿಕರ ಅನುಕೂಲಕ್ಕಾಗಿ ಕಾರ್ಯಚರಣೆಗೆ ಒಳಪಡಿಸಲಾಗುತ್ತಿದೆ.

ಆ. ಹೌದು

ಇ. ಮೇಲೆ (ಅ) ಕ್ಕೆ ನೀಡಿರುವ ಉತ್ತರದಿಂದ ಪ್ರಶ್ನೆ ಉದ್ಭವಿಸುವುದಿಲ್ಲ.

ಪ್ರಕಟಣೆ

ಅಧ್ಯಕ್ಷರು : ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಗಳವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ.

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 114ರ ಮೇರೆಗೆ ವಿಧಾನ ಸಭೆಯಿಂದ ಅಂಗೀಕಾರವಾದ, 1995ನೇ ಸಾಲಿನ ಕರ್ನಾಟಕ ವಿದ್ಯುತ್ ಸರಬರಾಜು ಉದ್ಯಮಗಳ (ಅರ್ಜನೆ) (ತಿದ್ದುಪಡಿ) ವಿಧೇಯಕವು ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ದಿನಾಂಕ : 5-4-95ರಯ ಅನುಮೋದಿಸಲ್ಪಟ್ಟಿದೆ ಎಂದು ತಿಳಿಸುತ್ತೇನೆ.

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 115ರ ಮೇರೆಗೆ ವಿಧಾನ ಸಭೆಯಿಂದ ಅಂಗೀಕೃತವಾದ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ 1995ನ್ನು, ಕರ್ನಾಟಕ ವಿಧಾನ ಪರಿಷತ್ತಿನಲ್ಲಿ, 5-4-95ರಂದು ತಿರಸ್ಕರಿಸಲಾಯಿತೆಂದು ತಿಳಿಸುತ್ತೇನೆ.

2. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಸಭೆಯ ಮುಂದಿಡಸಲಾದ ಕಾಗದ ಪತ್ರಗಳ ಪಟ್ಟಿ

ಶ್ರೀ ಎಂ.ಸಿ.ನಾಣಯ್ಯ : (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

I ಮುಖ್ಯ ಮಂತ್ರಿಗಳ ಪರವಾಗಿ ಶ್ರೀ ಎಂ. ಸಿ. ನಾಣಯ್ಯ (ಕಾನೂನು ಸಚಿವರು) 1978ನೇ ಇಸವಿಯ ಕರ್ನಾಟಕ ನಾಗರೀಕ ಸೇವಾ ಅಧಿನಿಯಮ 8(3) ಉಪ ಅನುಚ್ಛೇದದ 1ನೇ ಕಲಮಿನ ಮೇರೆಗೆ

ಕರ್ನಾಟಕ ರಾಜ್ಯ ಅರಣ್ಯ ಇಲಾಖೆಯ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು 994ಕ್ಕೆ ತಿದ್ದುಪಡಿ ಮಾಡುವ ಸಂಬಂಧದಲ್ಲಿ ದಿನಾಂಕ 31ನೇ ಜನವರಿ 1995ರಂದು ಹೊರಡಿಸಲಾದ ಸಿಆಸುಇ 29 ಸೇನಿಇ 94ನೇ ಕ್ರಮಾಂಕದ ಅಧಿಸೂಚನೆಯನ್ನು ಮಂಡಿಸುತ್ತೇನೆ.

II ಶ್ರೀ ಜೆ.ಹೆಚ್.ಪಟೀಲ್ (ಉಪ ಮುಖ್ಯ ಮಂತ್ರಿ) ಮಾನ್ಯ ಸಭಾಪತಿಯವರೆ,

1956ರ ಕಂಪನಿಗಳ ಕಾಯ್ದೆಯ 619ಎ ಕಲಮಿನ ಮೇರೆಗೆ

1989-90ನೇ ಸಾಲಿನ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತದ 20ನೇ ವಾರ್ಷಿಕ ವರದಿಯನ್ನು (ವಿಳಂಬಕ್ಕೆ ಕಾರಣದ ಟಿಪ್ಪಣಿಯೊಡನೆ) ಮಂಡಿಸುತ್ತೇನೆ.

III ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಮಂತ್ರಿ) ಮಾನ್ಯ ಸಭಾಪತಿಯವರೆ,

1993ರ ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮದ 262(3) ನೇ ಕಲಮಿನ ಮೇರೆಗೆ

1991-92ನೇ ಸಾಲಿನ ಧಾರವಾಡ ಜಿಲ್ಲಾ ಪರಿಷತ್ತಿನ ವಾರ್ಷಿಕ ಲೆಕ್ಕಪತ್ರಗಳ ಮೇಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

IV ಶ್ರೀ ಪಿ.ಜಿ.ಆರ್.ಸಿಂಧ್ಯ (ಗೃಹ ಮಂತ್ರಿ) ಮಾನ್ಯ ಸಭಾಪತಿಯವರೆ,

1956ರ ಕಂಪನಿಗಳ ಕಾಯ್ದೆಯ 619ಎ ಕಲಮಿನ ಮೇರೆಗೆ

1993-94ನೇ ಸಾಲಿನ ಕರ್ನಾಟಕ ರಾಜ್ಯ ಪೋಲೀಸ್ ಗೃಹ ನಿರ್ಮಾಣ ನಿಗಮ ನಿಯಮಿತದ 9ನೇ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧಕರ ವರದಿಯನ್ನು ಮಂಡಿಸುತ್ತೇನೆ.

V ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಮಂತ್ರಿ) ಮಾನ್ಯ ಸಭಾಪತಿಯವರೆ

1. 1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮದ 48(5)ನೇ ಕಲಮಿನ ಮೇರೆಗೆ

1992-93ಹಾಗೂ 1993-94ನೇ ಸಾಲುಗಳ ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಲೆಕ್ಕಪರಿಶೋಧನಾ ವರದಿಗಳು

2. 1993-94ನೇ ಸಾಲಿನ ಕಾರವಾರ ನಗರಾಭಿವೃದ್ಧಿ ಪ್ರಾಧಿಕಾರದ ಲೆಕ್ಕಪರಿಶೋಧನಾ ವರದಿ

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮದ 49ನೇ ಕಲಮಿನ ಮೇರೆಗೆ

3. 1993-94ನೇ ಸಾಲಿನ ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ವಾರ್ಷಿಕ ವರದಿ

4. 1994-95 (1.4.94ರಿಂದ 31.12.94 ರವರೆಗೆ)ನೇ ಸಾಲಿನ ಕಾರವಾರ ನಗರಾಭಿವೃದ್ಧಿ ಪ್ರಾಧಿಕಾರದ ವಾರ್ಷಿಕ ಆಡಳಿತ ವರದಿಗಳನ್ನು ಮಂಡಿಸುತ್ತೇನೆ.

VI ಶ್ರೀ ಬಿ.ಎನ್.ಬಚ್ಚೇಗೌಡ (ಪಶು ಸಂಗೋಪನೆ ರಾಜ್ಯ ಮಂತ್ರಿ) ಮಾನ್ಯ ಸಭಾಪತಿಯವರೆ,

1956ರ ಕಂಪನಿಗಳ ಕಾಯ್ದೆಯ 619ಎ ಕಲಮಿನ ಮೇರೆಗೆ

ಕರ್ನಾಟಕ ಮಾಂಸ ಮತ್ತು ಕೋಳಿ ಮಾರಾಟ ನಿಗಮ ನಿಯಮಿತದ ಇಪ್ಪತ್ತನೆಯ ವಾರ್ಷಿಕ ವರದಿ ಮತ್ತು 31.3.94ರ ಲೆಕ್ಕಪತ್ರಗಳನ್ನು (ವಿಳಂಭಕ್ಕೆ ಕಾರಣದ ಟಿಪ್ಪಣಿಯೊಡನೆ) ಮಂಡಿಸುತ್ತೇನೆ.

VII ಶ್ರೀ ಪಿ.ಸಿ.ಸಿದ್ದನಗೌಡರ್ (ಸಕ್ಕರೆ ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಜೀವಿಶಾಸ್ತ್ರ ರಾಜ್ಯ ಮಂತ್ರಿ) ಮಾನ್ಯ ಸಭಾಪತಿಯವರೆ

1956ರ ಕಂಪನಿಗಳ ಕಾಯ್ದೆಯ 619ಎ ಕಲಮಿನ ಮೇರೆಗೆ

1993-94ನೇ ಸಾಲಿನ ಮೈಸೂರು ಷುಗರ್ ಕಂಪನಿ ನಿಯಮಿತದ 60ನೇ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ಎಲ್ಲಾ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು.

11.20 ಎ ಎಂ

ಅಧ್ಯಕ್ಷರ ಅನುಮತಿ ಕೋರಿ ಪ್ರಸ್ತಾಪಿಸಲಾದ್ದ ವಿಷಯಗಳು

ವಿಷಯ : ಕೊಪ್ಪಳ ನಗರದಲ್ಲಿ ಉಂಟಾಗಿರುವ ಕುಡಿಯುವ ನೀರಿನ ಸಮಸ್ಯೆ ಬಗ್ಗೆ

ಶ್ರೀ ಸಂಗಣ್ಣಕರಡಿ : (ಕೊಪ್ಪಳ) ಮಾನ್ಯ ಅಧ್ಯಕ್ಷರೇ, ದಿನಾಂಕ 5-4-95ರಂದು ಕೊಪ್ಪಳ ತಾಲ್ಲೂಕಿನಲ್ಲಿ ಬೃಹತ್ ಚಳುವಳಿಯನ್ನು ಮಹಿಳೆಯರು ಮಾಡುತ್ತಿದ್ದಾರೆ. ಇದಕ್ಕೆ ಕಾರಣ ಏನೆಂದರೆ ಕೊಪ್ಪಳ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಬೃಹದಾಕಾರವಾಗಿದೆ. ಮಹಿಳೆಯರು ರಾತ್ರಿಯಲ್ಲಿ ನಿದ್ದೆಗೆಟ್ಟು ಬೆಳಗಿನ ಜಾವದವರೆಗೂ ಕಾದು ಕುಳಿತರೂ ನೀರು ಬಾರದೇ ಇದ್ದುದರಿಂದ ಉಗ್ರವಾದ ಚಳುವಳಿಯನ್ನು ಮಾಡುತ್ತಿದ್ದಾರೆ. ಈ ವಿಷಯವನ್ನು ನಾನು ಮಾನ್ಯಮಂತ್ರಿಗಳ ಗಮನಕ್ಕೆ ತರುತ್ತಿದ್ದೇನೆ.

ಶ್ರೀ ಎಂ.ಪಿ.ಪ್ರಕಾಶ್ : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) : ಮಾನ್ಯ ಅಧ್ಯಕ್ಷರೇ, ಕೊಪ್ಪಳ ನಗರ ನಗರಾಭಿವೃದ್ಧಿ ಸಚಿವರ ವ್ಯಾಪ್ತಿಗೆ ಬರುತ್ತದೆ. ನಿನ್ನೆ ಪ್ರಜಾವಾಣಿ ಪತ್ರಿಕೆಯಲ್ಲಿ ಸಹ ಪ್ರಕಟವಾಗಿದೆ. ಗ್ರಾಮೀಣಾಭಿವೃದ್ಧಿ ಸಚಿವರಿಂದ ಈಬಗ್ಗೆ ಸ್ಪಷ್ಟವಾದ ಉತ್ತರ ಬರಲಿಲ್ಲ ಎಂಬ ತಪ್ಪು ಕಲ್ಪನೆ ಮಾಡಿಕೊಂಡು ಮಾಡಿಯಾಗಿದೆ. ಈ ವಿಷಯ ನನ್ನ ವ್ಯಾಪ್ತಿಗೆ ಬರುವುದಿಲ್ಲ. ಈ ವಿಷಯ ಮಾನ್ಯ ನಗರಾಭಿವೃದ್ಧಿ ಸಚಿವರಿಗೆ ಬರುತ್ತದೆ. ಅವರು ಉತ್ತರ ಕೊಡಬಹುದು.

ಶ್ರೀ ವೈಜನಾಥಪಾಟೀಲ್ : (ನಗರಾಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೇ, ಕೊಪ್ಪಳ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಏನು ಇದೆ, ಆ ಬಗ್ಗೆ ಅಲ್ಲಿನ ಹೆಣ್ಣು ಮಕ್ಕಳು ಉಗ್ರ ಚಳುವಳಿಯನ್ನು ಮಾಡುತ್ತಿದ್ದಾರೆಂದು ಮಾನ್ಯ ಸದಸ್ಯರು ಪ್ರಸ್ತಾಪ ಮಾಡುತ್ತಿದ್ದಾರೆ. ನಾನು ಆ ಬಗ್ಗೆ ಒಂದು ವಿವರವಾದ ವರದಿಯನ್ನು ತರಿಸಿಕೊಂಡು ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸುವುದಕ್ಕೆ ಪ್ರಯತ್ನ ಮಾಡುತ್ತೇನೆ.

ಅಧ್ಯಕ್ಷರು : ತಕ್ಷಣ ಅಧಿಕಾರಿಗಳನ್ನು ಕರೆಯಿಸಿ ಏನಾದರೂ ವ್ಯವಸ್ಥೆ ಮಾಡಿಸಿ.

ಶ್ರೀಮತಿ ಪ್ರಮೀಳ ನೇಸರ್ಗಿ : ಮಾನ್ಯ ಅಧ್ಯಕ್ಷರೇ, ಕುಡಿಯುವ ನೀರಿನ ಸಲುವಾಗಿ ಮಹಿಳೆಯರು ಚಳುವಳಿ ಮಾಡುತ್ತಿದ್ದಾರೆಂದರೆ ಮಾನ್ಯ ಮಂತ್ರಿಗಳು ಉತ್ತರ ಸರಿಯಾಗಿ ಕೊಡಬೇಕು.